ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಸಾಸಂಇ : ಉ ನಿ : ಸುಮಪ : 2014–15 : ದಿನಾಂಕ: 6–1–2015

## ಪತ್ರಿಕಾ ಆಮಂತ್ರಣ

| ಕ್ರಮ ಸಂಖ್ಯೆ | ಕಾರ್ಯಕ್ರಮಗಳ ವಿವರ | ದಿನಾಂಕ ಸಮಯ | ಕಾರ್ಯಕ್ರಮ ನಡೆಯುವ ಸ್ಥಳ |
|---|---|---|---|
| 1 | ಬಿ.ಇ.ಎಲ್.ಗೆ ಭೇಟಿ:<br>ಶ್ರೀ ಮೊಹಮ್ಮದ್ ಹಮೀದ್ ಅನ್ಸಾರಿ, ಉಪ ರಾಷ್ಟ್ರಪತಿಗಳು | 7–1–2015<br>ಬುಧವಾರ<br>ಬೆಳಗ್ಗೆ 11–00 ಗಂಟೆಗೆ | ಬಿ.ಇ.ಎಲ್.<br>ಬೆಂಗಳೂರು. |

ನಿರ್ದೇಶಕರ ಪರವಾಗಿ

## ಪತ್ರಿಕಾ ಪ್ರಕಟಣೆ

## ಜೀವನ ರಕ್ಷಾ ಪ್ರಶಸ್ತಿ ಪ್ರದಾನ

ಬೆಂಗಳೂರು, ಜನವರಿ 6 (ಕರ್ನಾಟಕ ವಾರ್ತೆ)

ಭಾರತ ಸರ್ಕಾರವು ನೀಡುವ "ಉತ್ತಮ ಜೀವನ ರಕ್ಷಾ ಪ್ರಶಸ್ತಿ 2013"ರ ಪದಕವನ್ನು ಬೆಂಗಳೂರಿನ ಶ್ರೀ ಶಾಶ್ವತ್‌ರಾಜ್ ಅವರಿಗೆ ಇಂದು ರಾಜ್ಯ ಗೃಹ ಖಾತೆ ಸಚಿವ ಶ್ರೀ ಕೆ.ಜೆ. ಜಾರ್ಜ್ ಅವರು ವಿಧಾನ ಸೌಧದಲ್ಲಿ ಪ್ರಧಾನ ಮಾಡಿದರು.

ವಿಧಾನ ಸೌಧದ ಸಮಿತಿ ಕೊಠಡಿಯಲ್ಲಿ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಗೃಹ ಸಚಿವರು ಕೆ.ಆರ್. ನಗರ ತಾಲ್ಲೂಕಿನ ಮೂಲೆಬೆಟ್ಟು ಗ್ರಾಮದ ಹತ್ತಿರದ ಲಕ್ಷ್ಮಣ ತೀರ್ಥ ನದಿಯಲ್ಲಿ ಮೂರು ಜನರು ಮುಳುಗುತ್ತಿದ್ದುದನ್ನು ಕಂಡು ತನ್ನ ಜೀವನದ ಹಂಗು ತೊರೆದು ಕೂಡಲೇ ನದಿಗೆ ದುಮುಕಿ ಮೂರು ಜನರ ಪ್ರಾಣ ಉಳಿಸಿದ ಕೀರ್ತಿಗೆ ಶ್ರೀ ಶಾಶ್ವತ್‌ರಾಜ್ ಅವರು ಪಾತ್ರರಾಗಿದ್ದಾರೆ ಎಂದರು, ಪ್ರಶಸ್ತಿಯು 60,000 ರೂ. ನಗದು, ಪದಕ ಹಾಗೂ ಪ್ರಶಸ್ತಿ ಪತ್ರವನ್ನು ಒಳಗೊಂಡಿದೆ. ಸಮಾರಂಭದಲ್ಲಿ ಗೃಹ ಸಚಿವರ ಸಲಹೆಗಾರರಾದ ಶ್ರೀ ಕೆಂಪಯ್ಯ, ಸರ್ಕಾರದ ಅಪರ ಕಾರ್ಯದರ್ಶಿಗಳು ಹಾಗೂ ಒಳಾಡಳಿತ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳಾದ ಶ್ರೀ ಎಸ್.ಕೆ. ಪಟ್ನಾಯಕ್ ಹಾಗೂ ಗೃಹ ಇಲಾಖೆಯ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

# [ನಾಡಿನ ಯುವಜನತೆಯೆ ರಾಷ್ಟ್ರದ ಭವಿಷ್ಯದ ಅಡಿಪಾಯ: ಉಪರಾಷ್ಟ್ರಪತಿ ಅನ್ಸಾರಿ]

ಬೆಂಗಳೂರು, ಜನವರಿ 6 (ಕರ್ನಾಟಕ ವಾರ್ತೆ)

ಒಂದು ದೇಶದ ಭವಿಷ್ಯದ ಅಡಿಪಾಯವೆಂದರೆ ಅಲ್ಲಿನ ಯುವ ಜನತೆ. ಹಾಗಾಗಿ ಯುವ ಜನತೆಗೆ ಉತ್ತಮ ಗುಣಮಟ್ಟದ ಶಿಕ್ಷಣ ನೀಡುವುದು ದೇಶಕ್ಕೆ ಸಲ್ಲಿಸುವ ಅತಿ ದೊಡ್ಡ ಸೇವೆ ಎಂದು ಉಪರಾಷ್ಟ್ರಪತಿಗಳಾದ ಶ್ರೀ ಮೊಹಮ್ಮದ್ ಹಮೀದ್ ಅನ್ಸಾರಿ ಅವರು ಅಭಿಪ್ರಾಯ ಪಟ್ಟಿದ್ದಾರೆ.

ಇಂದು ನಗರದ ಆರ್.ವಿ. ಇಂಜಿನಿಯರಿಂಗ್ ಕಾಲೇಜಿನ ಸುವರ್ಣ ಮಹೋತ್ಸವದ ಅಂಗವಾಗಿ ಆಯೋಜಿಸಿದ್ದ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು. 2011 ರಲ್ಲಿ ಭಾರತದ ಜನಸಂಖ್ಯೆಯ ಶೇ. 50ರಷ್ಟು ಜನ 24 ಕ್ಕಿಂತ ಕಡಿಮೆ ವಯಸ್ಸಿನವರಾಗಿದ್ದರು. 2020 ರ ವೇಳೆಗೆ ನಮ್ಮ ಜನಸಂಖ್ಯೆಯ ಮೂರನೇ ಎರಡು ಭಾಗ ದುಡಿಮೆ ಮಾಡುವ ವಯಸ್ಸಿನದ್ದಾಗಿರುತ್ತದೆ. ಈ ಜನಸಂಖ್ಯಾ ಲಾಭವನ್ನು ಸೂಕ್ತವಾಗಿ ಬಳಸಿಕೊಳ್ಳಲು ಎರಡು ಪ್ರಮುಖ ಕೆಲಸಗಳನ್ನು ಮಾಡಬೇಕಿದೆ. ಒಂದು ಆರೋಗ್ಯ, ಶಿಕ್ಷಣ ಹಾಗೂ ಕೌಶಲ ಕ್ಷೇತ್ರಗಳಲ್ಲಿ ಸಾಧನೆ ಹಾಗೂ ಮತ್ತೊಂದು ಯುವ ಜನತೆಯ ಆಶೋತ್ತರಗಳನ್ನು ಈಡೇರಿಸುವಂತಹ ಅವಕಾಶಗಳ ನಿರ್ಮಾಣವಾಗಬೇಕಿದೆ.

ನಮ್ಮ ದೇಶದಲ್ಲಿ ಉನ್ನತ ಶಿಕ್ಷಣ ರಂಗವು ಲಭ್ಯತೆ, ಸಮತೆ ಮತ್ತು ಗುಣಮಟ್ಟದ ಸಮಸ್ಯೆಗಳಿಂದ ಬಳಲುತ್ತಿದೆ. ಮಹಿಳೆಯರು ಹಾಗೂ ದುರ್ಬಲ ವರ್ಗದವರು ಉನ್ನತ ಶಿಕ್ಷಣ ಕ್ಷೇತ್ರದಿಂದ ಇನ್ನೂ ವಂಚಿತರಾಗಿದ್ದಾರೆ. ಅಲ್ಲದೆ ಈ ಕ್ಷೇತ್ರದಲ್ಲಿ ತರಬೇತಾದ ಶಿಕ್ಷಕರ ಕೊರತೆಯಿದೆ. ಮೂಲ ಸೌಕರ್ಯದ ಕೊರತೆ ಹಳೆಯ ಅರ್ಥ ರಹಿತ ಪಠ್ಯಕ್ರಮದ ಸಮಸ್ಯೆಗಳಿವೆ. ಅಂತಾರಾಷ್ಟ್ರೀಯ ಶಿಕ್ಷಣ ಗುಣಮಟ್ಟಕ್ಕೆ ಹೋಲಿಸಿದಾಗ ನಾವು ಬಹಳ ಹಿಂದುಳಿದಿದ್ದೇವೆ ಎಂದ ಅವರು, ಉನ್ನತ ಶಿಕ್ಷಣ ದೇಶದ ಅಗತ್ಯತೆಗಳನ್ನು ಪೂರೈಸುವಂತಿರಬೇಕು. ಉದ್ಯೋಗದ ಮಾರುಕಟ್ಟೆಯತ್ತ ಗಮನವಿರಬೇಕು. ಜತೆಗೆ ಸ್ವಂತ ಉದ್ಯೋಗಕ್ಕೂ ಅವಕಾಶ ಕಲ್ಪಿಸಬೇಕು ಎಂದರು.

ಪ್ರತಿ ವರ್ಷ ಏಳು ಲಕ್ಷ ವಿಜ್ಞಾನ ಮತ್ತು ಇಂಜಿನಿಯರಿಂಗ್ ಪದವೀಧರರನ್ನು ತಯಾರು ಮಾಡುತ್ತಿದ್ದೇವೆ. ಆದರೆ ಕೇವಲ 25% ಮಾತ್ರ ಉದ್ಯೋಗಕ್ಕೆ ಅರ್ಹರು ಎಂದು ಉದ್ದಿಮೆ ಕ್ಷೇತ್ರ ಹೇಳುತ್ತಿದೆ. ಇತ್ತೀಚಿನ ವರ್ಷಗಳಲ್ಲಿ ಉನ್ನತ ಶಿಕ್ಷಣ ಪಡೆಯಲು ವಿದ್ಯಾರ್ಥಿಗಳು ದೌಡಾಯಿಸುತ್ತಿದ್ದಾರೆ. ಇದರಿಂದ ಕಾಲೇಜುಗಳು ವಿಶ್ವವಿದ್ಯಾನಿಲಯಗಳು ತುಂಬಿ ತುಳುಕುತ್ತಿದೆ. ಮೂಲ ಸೌಕರ್ಯಗಳ ಲಭ್ಯತೆ ಕೊರತೆಯಿದೆ. ಈ ಬಗ್ಗೆ ಸರ್ಕಾರ, ಖಾಸಗಿ, ನಾಗರಿಕ ಸಮಾಜ, ಎಲ್ಲ ಸೇರಿ ಕೆಲಸ ಮಾಡಬೇಕಿದೆ ಎಂದು ಉಪರಾಷ್ಟ್ರಪತಿಗಳು ಆಗ್ರಹಿಸಿದರು.

## ಯುವಜನತೆಗೆ ಜ್ಞಾನದಷ್ಟೇ ಧೈರ್ಯವೂ ಮುಖ್ಯ: ರಾಜ್ಯಪಾಲ ವಾಜುಭಾಯಿ ವಾಲ

ಯಾವುದೇ ಕ್ಷೇತ್ರಕ್ಕೆ ಸಂಬಂಧಿಸಿದಂತೆ ನೂತನ ವಿಚಾರಗಳನ್ನು ಹೊರತರಲು ಇಂದಿನ ಯುವಜನತೆಗೆ ಜ್ಞಾನವೆಷ್ಟೂ ಮುಖ್ಯವೋ ಅದನ್ನು ಪ್ರತಿಪಾದಿಸುವ ಧೈರ್ಯ ಹೊಂದುವುದೂ ಅಷ್ಟೇ ಮುಖ್ಯ ಎಂದು ರಾಜ್ಯದ ಘನತೆವೆತ್ತ ರಾಜಪಾಲರಾದ ಶ್ರೀ ವಾಜುಭಾಯಿ ರೂಡಾಭಾಯಿ ವಾಲ ಅವರು ಹೇಳಿದರು.

ಆರ್.ವಿ. ಇಂಜಿನಿಯರಿಂಗ್ ಕಾಲೇಜಿನ ಸುವರ್ಣ ಮಹೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಹಣವನ್ನು ಬೆನ್ನತ್ತಿ ಹೋಗದೇ ಸಮಾಜದಲ್ಲಿ ಉತ್ತಮ ಹೆಸರು, ಗೌರವ ಗಳಿಸುವತ್ತ ಗಮನ ಹರಿಸಿ, ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

**ನಮ್ಮ ದೇಶದಲ್ಲಿ ಮಹಿಳೆಯರು ಎಲ್ಲ ವಿಷಯಗಳಲ್ಲೂ ಪುರುಷರಿಗೆ ಸಮನಾದ ಜಾಣ್ಮೆ, ಸಾಮರ್ಥ್ಯಗಳನ್ನು ಹೊಂದಿದ್ದಾರೆ. ಆದರೆ ಇಂದಿಗೂ ಗ್ರಾಮೀಣ ಪ್ರದೇಶದಲ್ಲಿ ಬಹುಪಾಲು ಹೆಣ್ಣು ಮಕ್ಕಳು ಶಿಕ್ಷಣದಿಂದ ವಂಚಿತರಾಗಿದ್ದಾರೆ. ಇಂದಿನ ವಿದ್ಯಾರ್ಥಿಗಳು ಮುಂದೆ ದುಡಿಯುವ ವರ್ಗಕ್ಕೆ ಸೇರುವರು. ಆಗ, ಪ್ರತಿಯೊಬ್ಬರೂ ಗ್ರಾಮೀಣ ಪ್ರದೇಶದ ಒಬ್ಬ ಬಾಲಕಿಯ ಶಿಕ್ಷಣದ ಜವಾಬ್ದಾರಿ ಹೊತ್ತರೆ, ದೇಶದಲ್ಲಿ ಮಹಿಳಾ ಸಬಲೀಕರಣ ಸಾರ್ಥಕಗೊಳ್ಳುತ್ತದೆ ಎಂದು ಅಭಿಪ್ರಾಯ ಪಟ್ಟರು.**

**ಸಮಾರಂಭದಲ್ಲಿ ಭಾಗವಹಿಸಿದ ಮುಖ್ಯಮಂತ್ರಿಗಳು ಕಾಲೇಜಿನ ಸಾಧನೆಗಳ ಬಗ್ಗೆ ಶ್ಲಾಘಿಸಿದರು ಹಾಗೂ ಸುವರ್ಣ ಮಹೋತ್ಸವಕ್ಕೆ ಅಭಿನಂದಿಸಿದರು. ತಾಂತ್ರಿಕ ಹಾಗೂ ಉನ್ನತ ಶಿಕ್ಷಣ ಹಾಗೂ ಪ್ರವಾಸೋದ್ಯಮ ಸಚಿವ ಶ್ರೀ ಆರ್ ವಿ ದೇಶಪಾಂಡೆ, ಕೃಷಿ ಸಚಿವ ಶ್ರೀ ಕೃಷ್ಣ ಭೈರೇಗೌಡ ಸಮಾರಂಭದಲ್ಲಿ ಪಾಲ್ಗೊಂಡಿದ್ದರು.**

# ಮಾಧುರ್ಯ ಮೊಳಗಿಸಿದ "ಗಾನಯಾನ"

**ಬೆಂಗಳೂರು, ಜನವರಿ 6 (ಕರ್ನಾಟಕ ವಾರ್ತೆ)**

ಬದಲಾದ ಕಾಲಘಟ್ಟದಲ್ಲಿಯು ಕನ್ನಡದ ಹಳೆಯ ಚಿತ್ರಗೀತೆಗಳು ಮನ ಮತ್ತು ಹೃದಯ ತುಂಬುವ ಮಾಧುರ್ಯ ಉಳಿಸಿಕೊಂಡಿವೆ ಎಂದು ಖ್ಯಾತ ಸಂಗೀತ ನಿರ್ದೇಶಕ ಶ್ರೀ ವಿ. ಮನೋಹರ ಮೆಚ್ಚುಗೆ ವ್ಯಕ್ತಪಡಿಸಿದರು.

ಅವರು ಇಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆವತಿಯಿಂದ ಯಲಹಂಕದಲ್ಲಿನ ಶೇಷಾದ್ರಿಪುರಂ ಪ್ರಥಮ ದರ್ಜೆ ಕಾಲೇಜಿನಲ್ಲಿ ಆಯೋಜಿಸಿದ "ಗಾನಯಾನ" ಕಾರ್ಯಕ್ರಮದ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಕನ್ನಡ ಚಿತ್ರರಂಗ ಆರಂಭದ ದಿನಗಳಲ್ಲಿ ರಚಿತವಾದ ಕನ್ನಡದ ಸಂಗೀತಗಳನ್ನು ಮೆಲುಕುಹಾಕಿದ ಅವರು ಅಂದಿನ ದಿನಗಳಲ್ಲಿ ಹಾಡುಗಳೆ ಚಿತ್ರಕ್ಕೆ ಜೀವಾಳವಾಗಿರುತ್ತಿದ್ದವು ಎಂಬುದನ್ನು ಹಳೆಯ ಹಾಡುಗಳ ಸಾಲುಗಳನ್ನು ನೆನೆಪಿಸುತ್ತಾ ಸಂಗೀತಕ್ಕಿರುವ ಸತ್ವ ಮತ್ತು ಶಕ್ತಿಯನ್ನು ಬಣ್ಣಿಸಿದರು. ಅಂದಿನ ಸಾಹಿತಿಗಳು, ಸಂಗೀತ ನಿರ್ದೇಶಕರು ಹಾಗೂ ಸಂಯೋಜಕರುಗಳು ಚಿತ್ರಕ್ಕೆ ಜೀವತುಂಬುವಂತಹ ಅರ್ಥಭರಿತ, ಸಾಹಿತ್ಯಭರಿತ ಹಾಗೂ ಸಮಾಜಕ್ಕೆ ಸಂದೇಶ ಸಾರುವ ಹಾಡುಗಳನ್ನು ರಚಿಸಿದ್ದರ ಫಲವಾಗಿ ಇಂದಿಗೂ ಕೂಡ ಕನ್ನಡ ಚಿತ್ರರಂಗದ ಹಾಡುಗಳು ಬೇರೆ ಭಾಷೆಯ ಹಾಡುಗಳಿಗೆ ಸರಿಸಮಾನವಾಗಿ ಮುನ್ನಡೆದಿದೆ ಎಂದು ಹೇಳುತ್ತಾ ಎಲ್ಲಾ ಸಂಗೀತ ನಿರ್ದೇಶಕರ ಸಾಹಿತ್ಯದ ಕೊಡುಗೆಯನ್ನು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದ ವಾರ್ತಾ ಇಲಾಖೆಯ ನಿರ್ದೇಶಕ ಶ್ರೀ ಎನ್. ಆರ್. ವಿಶುಕುಮಾರ್ ಅವರು ಮಾತನಾಡಿ ಹಳೆಯ ಚಿತ್ರಗಳ ಸಂಗೀತದಲ್ಲಿ ಅರ್ಥಪೂರ್ಣ ಸಾಹಿತ್ಯ, ಮನತುಂಬುವ ಮಾಧುರ್ಯ, ಸಮಾಜಕ್ಕೆ ಸಂದೇಶ ನೀಡುವಂತಹ ಸತ್ವವಿದ್ದು, ಅವುಗಳನ್ನು ಇಂದಿನ ಪೀಳಿಗೆಗೆ ಪರಿಚಯಿಸುವ ಪರಿಕಲ್ಪನೆಯಲ್ಲಿ ವಾರ್ತಾ ಇಲಾಖೆ "ಗಾನಯಾನ" ಕಾರ್ಯಕ್ರಮವನ್ನು ಪ್ರಾಯೋಗಿಕವಾಗಿ ಹಮ್ಮಿಕೊಂಡಿದೆ. ಯುವ ಪೀಳಿಗೆಯಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದ್ದು,

ಮುಂದಿನ ದಿನಗಳ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಈ ಕಾರ್ಯಕ್ರಮಕ್ಕೆ ಚಾಲನೆ ದೊರಕಿಸಿಕೊಡಲಾಗುವುದು ಎಂದು ಹೇಳಿದರು.

ಸಮಾರಂಭದ ಅಧ್ಯಕ್ಷತೆವಹಿಸಿದ್ದ ಶೇಷಾದ್ರಿಪುರಂ ಶಿಕ್ಷಣ ದತ್ತಿ ಪ್ರಧಾನ ಕಾರ್ಯದರ್ಶಿ ಡಾ. ವೊಡೇಪಿ ಕೃಷ್ಣ ಅವರು ಮಾತನಾಡಿ ಬೇರೆ ಯಾವುದೇ ಭಾಷೆ ಹಾಡುಗಳಿಗೆ ಕಡಿಮೆಯಿಲ್ಲದಂತೆ ಕನ್ನಡ ಚಿತ್ರಗೀತೆಗಳು ಸತ್ವ ಮಾಧುರ್ಯದಿಂದ ಕೂಡಿವೆ ಎಂದು ಕೆಲವೊಂದು ಚಿತ್ರಗಳ ಹಾಡಿನ ಸಾಲುಗಳನ್ನು ಸ್ಮರಿಸಿ ಮೆಚ್ಚುಗೆ ವ್ಯಕ್ತಪಡಿಸಿದರು.

ಕಾರ್ಯಕ್ರಮದಲ್ಲಿ ಶೇಷಾದ್ರಿಪುರಂ ಶಿಕ್ಷಣ ದತ್ತಿ ನಿರ್ದೇಶಕ ಡಾ. ಎಂ. ಪ್ರಕಾಶ್, ವಾರ್ತಾ ಇಲಾಖೆ ಜಂಟಿ ನಿರ್ದೇಶಕ ಆರ್. ಕೆ. ಶಿವರಾಂ, ಉಪ ನಿರ್ದೇಶಕ ಹೆಚ್. ಬಿ. ದಿನೇಶ್ ಹಾಗೂ ಕಾಲೇಜಿನ ಪ್ರಾಂಶುಪಾಲ ಡಾ. ಎಸ್. ಎನ್. ವೆಂಕಟೇಶ್ ಅವರು ಉಪಸ್ಥಿತರಿದ್ದರು.

ಶಬ್ಬೀರ್ ಮತ್ತು ತಂಡದವರಿಂದ ಪ್ರಸ್ತುತಪಡಿಸಿದ ಹಳೆಯ ಹಾಡುಗಳಿಗೆ ನಿರೂಪಕಿ ಅಪರ್ಣಾ ಅವರು ಅರ್ಥಪೂರ್ಣ ವಿವರಣೆ ನೀಡಿದರು. ಸಂಗೀತಕ್ಕೆ ಪ್ರೇಕ್ಷಕರಿಂದ ಹೃದಯ ತುಂಬಿದ ಮೆಚ್ಚುಗೆ ವ್ಯಕ್ತವಾಯಿತು.

ದೇ:ಜಿಪಿಆರ್

## ಗಣಕಯಂತ್ರ ಶಿಕ್ಷಣ : ಪರೀಕ್ಷಾ ಪ್ರವೇಶ ಪತ್ರ ಪಡೆದುಕೊಳ್ಳಲು ಸೂಚನೆ

**ಬೆಂಗಳೂರು, ಜನವರಿ 6 (ಕರ್ನಾಟಕ ವಾರ್ತೆ)**

ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ರವರ ವತಿಯಿಂದ ಗಣಕಯಂತ್ರ ಶಿಕ್ಷಣ ಪರೀಕ್ಷೆಯಾದ ಆಫೀಸ್ ಆಟೋಮೇಷನ್ ಪರೀಕ್ಷೆಯು ದಿನಾಂಕ : 12–01–2015 ರಿಂದ 14–01–2015 ರವರೆಗೆ ರಾಜ್ಯಾದ್ಯಂತ ನಡೆಯಲಿದೆ. ಪ್ರವೇಶ ಪತ್ರಗಳನ್ನು ಸಂಬಂಧಿಸಿದ ಜಿಲ್ಲಾ ಡಯಟ್ ಕೇಂದ್ರಗಳಿಗೆ ಕಳುಹಿಸಲಾಗಿದ್ದು, ಶಿಕ್ಷಣ ಸಂಸ್ಥೆಯವರು ಅಲ್ಲಿಂದ ಪಡೆದು ಸಕಾಲದಲ್ಲಿ ವಿದ್ಯಾರ್ಥಿಗಳಿಗೆ ವಿತರಿಸುವ ವ್ಯವಸ್ಥೆ ಮಾಡಲು ತಿಳಿಸಿದೆ.

ಪಹೊ:ಬಾಬು:ಜಿಪಿಆರ್.

## Admission Tickets issued for Computer Education Examinations

Bangalore, January 6th (Karnataka Information)

Office Automation Computer Education Examination will be conducted by Karnataka State Education Examination Board. Bangalore from 12-01-2015 to 14-01-2015 throughout the State Admission Tickets have been sent to concerned

District DIETs. Head of the Institutions should collect the admission tickets and distribute the same to the Students well intime.

ph:babu:gpr.

<u>**ಛಾಯಾಚಿತ್ರ ಶೀರ್ಷಿಕೆ:**</u>

**ಉಪ ರಾಷ್ಟ್ರಪತಿ ಶ್ರೀ ಮೊಹಮದ್ ಹಮೀದ್ ಅನ್ಸಾರಿ ಅವರು ಇಂದು ಬೆಂಗಳೂರಿನ ಆರ್.ವಿ. ಇಂಜಿನಿಯರಿಂಗ್ ಕಾಲೇಜಿನ ಸುವರ್ಣ ವರ್ಷಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿದರು ಹಾಗೂ ಸುವರ್ಣ ಮಹೋತ್ಸವದ ಸ್ಮರಣ ಸಂಚಿಕೆ ಬಿಡುಗಡೆ ಮಾಡಿದರು. ಈ ಸಮಾರಂಭದಲ್ಲಿ ರಾಜ್ಯಪಾಲ ಶ್ರೀ ವಜುಭಾಯಿ ರೂಢಭಾಯಿ ವಾಲಾ, ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಹಾಗೂ ಉನ್ನತ ಶಿಕ್ಷಣ ಖಾತೆ ಸಚಿವ ಶ್ರೀ ಆರ್.ವಿ. ದೇಶಪಾಂಡೆ ಅವರು ಪಾಲ್ಗೊಂಡಿದ್ದರು.**